## ಕರ್ನಾಟಕ ವಿಧಾನ ಸಭೆ

ಗುರುವಾರ 13ನೇ ಫೆಬ್ರವರಿ 1997 ರಂದು ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗ 11-10 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು:- (ಶ್ರೀ ರಮೇಶ್ ಕುಮಾರ್) ಅವರು ಪೀಠವನ್ನು ಅಲಂಕರಿಸಿದ್ದರು.

### 1. ಪ್ರಮಾಣ ವಚನ ಸ್ವೀಕಾರ

ಅಧ್ಯಕ್ಷರು:- ಈಗ ನೂತನ ಸದಸ್ಯರಿಂದ ಪ್ರಮಾಣ ವಚನ ಸ್ವೀಕಾರ.

ಶ್ರೀ ಸಿ.ಎಂ. ಲಿಂಗಪ್ಪ, ರಾಮನಗರ ಕ್ಷೇತ್ರ

ಶ್ರೀ ಜೆ.ಸಿ. ಮಾಧುಸ್ವಾಮಿ, ಚಿಕ್ಕನಾಯ್ಕನಹಳ್ಳಿ ಕ್ಷೇತ್ರ

### 2. ಸಂತಾಪ ಸೂಚನೆ

ಅಧ್ಯಕ್ಷರು:- ವಿಧಾನ ಸಭೆಯ ಮಾಜಿ ಸದಸ್ಯರುಗಳಾದ ಶ್ರೀಯುತ ಹನುಮನಗೌಡ ಶೇಖರಗೌಡ ಪಾಟೀಲ್ ಹಾಗೂ ಮಹೇಂದ್ರ ಕುಮಾರ್ ಕಲ್ಲಪ್ಪ ಅವರುಗಳು ನಿಧನರಾದುದನ್ನು ಈ ಸದನಕ್ಕೆ ಅತ್ಯಂತ ವಿಷಾದದಿಂದ ತಿಳಿಸುತ್ತಿದ್ದೇನೆ.

ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಶ್ರೀ ಹನುಮನಗೌಡ ಶೇಖರಗೌಡ ಪಾಟೀಲ್ ಅವರು ದಿನಾಂಕ 9-11-96 ರಂದು ನಿಧನರಾದರು. ಏಳು ಹಾಗೂ ಒಂಭತ್ತನೇ ವಿಧಾನ ಸಭೆಗೆ ಕುಷ್ಟಗಿ ಕ್ಷೇತ್ರದಿಂದ ಆಯ್ಕೆಯಾಗಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರಾಗಿದ್ದು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಶ್ರಮಿಸಿದ್ದರು.

ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಶ್ರೀ ಮಹೇಂದ್ರಕುಮಾರ್ ಕಲ್ಲಪ್ಪ ಅವರು ದಿನಾಂಕ 13-1-97 ರಂದು ನಿಧನರಾದರು. ಅವರು ಐದು ಹಾಗೂ ಒಂಭತ್ತನೇ ವಿಧಾನ ಸಭೆಗೆ ಹುಲಸೂರು ಕ್ಷೇತ್ರದಿಂದ ಆಯ್ಕೆಯಾಗಿದ್ದರು. ಶ್ರೀಯುತರು ವೃತ್ತಿಯಲ್ಲಿ ಕೃಷಿಕರು ಹಾಗೂ ಸಮಾಜ ಸೇವಕರಾಗಿದ್ದರು.

ಈ ಮಹನೀಯರ ಗೌರವಾರ್ಥವಾಗಿ ಮಾನ್ಯ ಸದಸ್ಯರುಗಳು ಎದ್ದುನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

(ಮೃತರ ಗೌರವಾರ್ಥ ಸದನದ ಎಲ್ಲಾ ಸದಸ್ಯರೂ ಎದ್ದುನಿಂತು ಒಂದು ನಿಮಿಷ ಮೌನವನ್ನಾಚರಿಸಿದರು.)

ಅಧ್ಯಕ್ಷರು:- ಈ ಸದನವು ಅಂಗೀಕರಿಸಿದ ಸಂತಾಪ ಸೂಚಕ ನಿರ್ಣಯವನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.